**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 04–08–2021**

# ಪತ್ರಿಕಾ ಪ್ರಕಟಣೆ

## PRESS RELEASE

ಇಪ್ಪತ್ತೊಂಭತ್ತು ಶಾಸಕರ ಸೇರ್ಪಡೆಯೊಂದಿಗೆ ಮೂವತ್ತಕ್ಕೆ ಏರಿದ_ಬಸವರಾಜ ಬೊಮ್ಮಾಯಿ ಸಂಪುಟ ಬಲ

ಬೆಂಗಳೂರು, ಆಗಸ್ಟ್ 4 ( ಕರ್ನಾಟಕ ವಾರ್ತೆ ) :

ಇಪ್ಪತ್ತೊಂಬತ್ತು ಶಾಸಕರ ಸೇರ್ಪಡೆಯೊಂದಿಗೆ ಬಸವರಾಜ ಬೊಮ್ಮಾಯಿ ನೇತೃತ್ವದ ಕರ್ನಾಟಕ ಸರ್ಕಾರದ ಸಂಪುಟ ಬಲ ಇಂದು ಮೂವತ್ತಕ್ಕೆ ಏರಿದೆ. ರಾಜಭವನದ ಗಾಜಿನ ಮನೆಯಲ್ಲಿ ಇಂದು ಮಧ್ಯಾಹ್ನ ನಡೆದ ಪ್ರಮಾಣ ವಚನ ಸಮಾರಂಭದಲ್ಲಿ ಗೋವಿಂದ ಮುಕ್ತಪ್ಪ ಕಾರಜೋಳ, ಕೆ.ಎಸ್. ಈಶ್ವರಪ್ಪ, ಆರ್. ಅಶೋಕ್, ಬಿ. ಶ್ರೀರಾಮುಲು, ವಿ. ಸೋಮಣ್ಣ, ಉಮೇಶ್ ವಿಶ್ವನಾಥ ಕತ್ತಿ. ಎಸ್. ಅಂಗಾರ, ಜೆ. ಸಿ. ಮಾಧುಸ್ವಾಮಿ, ಅರಗ ಜ್ಞಾನೇಂದ್ರ, ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಿ.ಸಿ. ಪಾಟೀಲ್, ಆನಂದ್ ಸಿಂಗ್, ಕೋಟಾ ಶ್ರೀನಿವಾಸ ಪೂಜಾರಿ, ಪ್ರಭು ಚವ್ಹಾಣ್, ಮುರುಗೇಶ್ ರುದ್ರಪ್ಪ ನಿರಾಣಿ, ಅರೆಬೈಲ್ ಶಿವರಾಂ ಹೆಬ್ಬಾರ್, ಎಸ್.ಟಿ. ಸೋಮಶೇಖರ್, ಬಿ.ಸಿ. ಪಾಟೀಲ್, ಬಿ. ಎ. ಬಸವರಾಜ (ಬೈರತಿ ಬಸವರಾಜ್), ಡಾ. ಕೆ. ಸುಧಾಕರ್, ಕೆ. ಗೋಪಾಲಯ್ಯ, ಶಶಿಕಲಾ ಜೊಲ್ಲೆ, ಎನ್. ನಾಗರಾಜ್ (ಎಂ.ಟಿ.ಬಿ. ನಾಗರಾಜ್) ಕೆ.ಸಿ. ನಾರಾಯಣ್ ಗೌಡ, ಬಿ.ಸಿ. ನಾಗೇಶ್, ವಿ. ಸುನೀಲ್ ಕುಮಾರ್, ಹಾಲಪ್ಪ ಆಚಾರ್, ಶಂಕರ್ ಪಾಟೀಲ್ ಮುನೇನಕೊಪ್ಪ ಹಾಗೂ ಮುನಿರತ್ನ ಅವರು ಅಧಿಕಾರಪದ ಮತ್ತು ಗೋಪ್ಯತಾ ಪ್ರಮಾಣ ವಚನವನ್ನು ಸ್ವೀಕರಿಸುವುದರೊಂದಿಗೆ ಜುಲೈ 28 ರಂದು ಅಸ್ತಿತ್ವಕ್ಕೆ ಬಂದ ಬಸವರಾಜ ಬೊಮ್ಮಾಯಿ ಅವರ ಸಚಿವ ಸಂಪುಟ ಪೂರ್ಣ ಪ್ರಮಾಣದ ರೂಪ ಪಡೆಯಿತು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ನೂತನ ಸದಸ್ಯರಿಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಸುಮಾರು 75 ನಿಮಿಷಗಳ ಕಾಲ ನಡೆದ ಈ ಪ್ರಮಾಣ ವಚನ ಸಮಾರಂಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ರಾಜ್ಯ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ, ಭಾರತೀಯ ಜನತಾ ಪಕ್ಷದ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕದ ಉಸ್ತುವಾರಿ ಅರುಣ್ ಸಿಂಗ್, ಪಕ್ಷದ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್, ಸಂಸದ ಡಾ.ಉಮೇಶ್ ಜಾಧವ್ ಒಳಗೊಂಡಂತೆ ಗಣ್ಯಾತಿ ಗಣ್ಯರು ಈ ಸಮಾರಂಭದಲ್ಲಿ ಹಾಜರಿದ್ದು, ನೂತನ ಸಚಿವರಿಗೆ ಅಭಿನಂದನೆ ಸಲ್ಲಿಸಿದರು.

ಗಮನಾರ್ಹ ಅಂಶಗಳು !

ಪ್ರಮಾಣ ವಚನ ಸ್ವೀಕರಿಸಲು ಆಗಮಿಸಿದ ಬಹುತೇಕ ಶಾಸಕರು ತಮ್ಮ ಕೊರಳಿಗೆ ಕೇಸರಿ ಅಂಗ ವಸ್ತ್ರವನ್ನು ತೊಟ್ಟಿದ್ದರು. ಬಂಜಾರ ಸಮುದಾಯದ ಆಕರ್ಷಕ ಉಡುಗೆ ತೊಟ್ಟ ಪ್ರಭು ಚವ್ಹಾಣ್ ಅವರು ತಮ್ಮ ಉಡುಗೆ–ತೊಡುಗೆಯಿಂದ ಎಲ್ಲರ ಗಮನ ಸೆಳೆದರು. ಶಶಿಕಲಾ ಅಣ್ಣಾ ಸಾಹೇಬ ಜೊಲ್ಲೆ ಅವರು ಏಕೈಕ ಮಹಿಳಾ ಸದಸ್ಯೆಯಾಗಿ ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದರು. ಎಲ್ಲಾ ಸಚಿವರೂ ಕನ್ನಡ ಭಾಷೆಯಲ್ಲಿಯೇ ಹಾಗೂ ದೇವರ ಹೆಸರಿನಲ್ಲಿಯೇ ಪ್ರಮಾಣ ವಚನ ಸ್ವೀಕರಿಸಿದ್ದು ಒಂದು ವಿಶೇಷವಾದರೆ ಮುರುಗೇಶ್ ನಿರಾಣಿ ಹಾಗೂ ಶಂಕರ್ ಪಾಟೀಲ್ ಮುನೇನ

ಕೊಪ್ಪ ಅವರು ದೇವರ ಜೊತೆಗೆ ರೈತರ ಹೆಸರು ಸೇರಿಸಿ ಪ್ರಮಾಣ ವಚನ ಸ್ವೀಕರಿಸಿದರು. ಅರೆಬೈಲ್ ಶಿವರಾಂ ಹೆಬ್ಬಾರ್ ಹಾಗೂ ಶಶಿಕಲಾ ಜೊಲ್ಲೆ ಅವರು ದೇವರ ಜೊತೆಗೆ ಕ್ಷೇತ್ರದ ಜನರ ಹೆಸರಲ್ಲೂ ಪ್ರಮಾಣ ಮಾಡಿದರು. ಆನಂದ್ ಸಿಂಗ್ ಅವರು ವಿಜಯನಗರದ ಪಂಪ ವಿರೂಪಾಕ್ಷ ಮತ್ತು ತಾಯಿ ಭುವನೇಶ್ವರಿ ಹೆಸರಿನಲ್ಲಿ ಹಾಗೂ ಬಿ ಸಿ. ಪಾಟೀಲ್ ಅವರು ಜಗಜ್ಯೋತಿ ಬಸವೇಶ್ವರ ಹಾಗೂ ರೈತರ ಹೆಸರಿನಲ್ಲಿ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಪ್ರಭು ಚೌವ್ಹಾಣ್ ಅವರು ಗೋಮಾತೆ ಹಾಗೂ ಸಂತ ಸೇವಾಲಾಲ್ ಅವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಪ್ರಮಾಣ ವಚನ ಸ್ವೀಕರಿಸಿದ ಎಲ್ಲಾ ಸಚಿವರಿಗೂ ರಾಜ್ಯಪಾಲರು ಹಾಗೂ ಮುಖ್ಯಮಂತ್ರಿ ಹೂ–ಗುಚ್ಛ ನೀಡಿ ಖುದ್ದು ಅಭಿನಂದಿಸಿ ಶುಭ ಹಾರೈಸಿದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿ ಕುಮಾರ್ ಅವರು ಕಾರ್ಯಕ್ರಮವನ್ನು ನಿರೂಪಿಸಿ ನಿರ್ವಹಿಸಿದರು.

***********

ಡಿ ಪಿ ಎಂ : ಜೆ ಜಿ : ವೈ ಸಿ ಎಸ್

## ಕಾರ್ಯಕ್ಷಮತೆಯನ್ನು ಅಧ್ಯಯನ ಮಾಡಲು ಕರಾರಸಾ ನಿಗಮಕ್ಕೆ ಟಾಟಾ ಮೋಟಾರ್ಸ್ ಉಚಿತವಾಗಿ ಬಿ ಎಸ್ -6 ಚಾಸಿಸ್ ವಿತರಣೆ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ) :

ಕರಾರಸಾ ನಿಗಮಕ್ಕೆ ಟಾಟಾ ಮೋಟಾರ್ಸ್ ರವರು ಉಚಿತವಾಗಿ ಬಿಎಸ್ -6 ಚಾಸಿಸ್ ಅನ್ನು ಉಚಿತವಾಗಿ ಕಾರ್ಯಕ್ಷಮತೆಯನ್ನು ಅಧ್ಯಯನ ಮಾಡಲು ನೀಡಿರುತ್ತಾರೆ.

ಬಿಎಸ್ -6 ವಾಹನದ ಕಾರ್ಯಾಚರಣೆಯನ್ನು ದಕ್ಷಿಣ ಭಾರತದಲ್ಲಿ ಪ್ರಥಮ ಬಾರಿಗೆ ಮಾಡಲಾಗುತ್ತಿದೆ. ಈ ಚಾಸಿಸ್‌ನ ಅಂದಾಜು ವೆಚ್ಚ ರೂ. 27 ಲಕ್ಷಗಳಾಗಿದೆ. ಇದು ಬಿಎಸ್ - 6 ಮಾದರಿಯ ಚಾಸ್ಸಿಯಾಗಿದ್ದು, 4 ಸಿಲಿಂಡರ್, 5 ಲೀ 180 ಎಚ್‌ಪಿ ಇಂಜಿನ್ ಆಗಿರುತ್ತದೆ. ಇದರ ವೀಲ್‌ಬೇಸ್ 224" ಇರುತ್ತದೆ. ಹಾಗೂ ಬಿಎಸ್ -4 ಗೆ ಹೋಲಿಸಿದರೆ ಹೆಚ್ಚು ಇಂಧನ ಕ್ಷಮತೆ ಹೊಂದಿದೆ. ಈ ಇಂಜಿನ್‌ನಲ್ಲಿ ಪವರ್ ಟು ವೇಟ್ ಅನುಪಾತ ಹೆಚ್ಚಾಗಿರುತ್ತದೆ. ಈ ಚಾಸ್ಸಿಯ ಮೇಲೆ ನಿಗಮದ ಪ್ರಾದೇಶಿಕ ಕಾರ್ಯಾಗಾರ ಕೆಂಗೇರಿಯಲ್ಲಿ ಬಸ್ ಕವಚ ನಿರ್ಮಿಸಲಾಗುವುದು.

ಮೆ: ಟಾಟಾ ಮೋಟಾರ್ಸ್ ನಿಂದ ಹಾಜರಿದ್ದ ಅಜಯ್ ಗುಪ್ತಾ, ಪ್ರಾದೇಶಿಕ ವ್ಯವಸ್ಥಾಪಕರು, ಸರ್ಕಾರ ಮತ್ತು STU- ವ್ಯಾಪಾರ, ಮೆ: ಟಾಟಾ ಮೋಟಾರ್ಸ್ ರವರು ಈ ಸಂಬಂಧ ಕಾಗದಪತ್ರಗಳನ್ನು ಶಿವಯೋಗಿ. ಸಿ.ಕಳಸದ, ಭಾಆಸೇ, ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಆರ್ ಟಿಸಿ ರವರಿಗೆ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಟಿ. ವೆಂಕಟೇಶ್, ಭಾಆಸೇ, ನಿರ್ದೇಶಕರು (ಸಿ & ಪ), ಕೆ.ರಾಮಮೂರ್ತಿ, ಮುಖ್ಯ ಯಾಂತ್ರಿಕ ಅಭಿಯಂತರರು (ನಿ), ಎನ್.ಕೆ.ಬಸವರಾಜು, ಮುಖ್ಯ ಯಾಂತ್ರಿಕ ಅಭಿಯಂತರರು(ಉ), ಸಾಗರ್, ರಾಜ್ಯ ಮುಖ್ಯಸ್ಥ, ಮೆ: ಟಾಟಾ ಮೋಟಾರ್ಸ್ ಮತ್ತು ಅರವಿಂದ ಮೋಟಾರ್ಸ್ ತಂಡದವರು ಉಪಸ್ಥಿತರಿದ್ದರು.

## Handing over of New Tata BS-6 chassis to KSRTC at free of cost by Tata Motors for trial run to study the performance.

Bengaluru August 04 (Karnataka Information):

Introducing BS-6 for the first time in South India. The tentative cost of this chassis is Rs. 27 lakhs, This is a BS-6 chassis with 4 cylinders, 5ltrs 180Hp engine with 224”wheelbase and more fuel efficient compared to BS-4. Bus body will be built on this chassis at KSRTC, Regional workshop, Kengeri.

Ajay Gupta, Regional Manager, Govt and STU-Business, M/s Tata Motors handing over chasis papers to Shivayogi.C.Kalasad, IAS, Managing Director, KSRTC. T Venkatesh, IAS Director (P&E), K. Ramamurthy, CME(M), N. K. Basavaraju, CME(P), Sagar, State Head, M/s Tata Motors & Arvind Motors team were present .

## ಬೆಳೆ ವಿಮಾ ಪರಿಹಾರ ಮೊತ್ತ ಪಡೆಯಲು ಆಧಾರ್ ಜೋಡಣೆ ಕಡ್ಡಾಯ

ಬೆಂಗಳೂರು, ಆಗಸ್ಟ್ 04 (ಕರ್ನಾಟಕ ವಾರ್ತೆ) :

ಕರ್ನಾಟಕ ರೈತ ಸುರಕ್ಷಾ – ಪ್ರಧಾನ ಮಂತ್ರಿ ಫಸಲ್ ವಿಮೆ ಯೋಜನೆಯಡಿ ಬೆಳೆ ವಿಮೆ ನೋಂದಣಿ ಮಾಡಲು ಆಧಾರ್ ಕಡ್ಡಾಯಗೊಳಿಸಲಾಗಿದೆ ಎಂದು ಕೃಷಿ ಆಯುಕ್ತರು ತಿಳಿಸಿದ್ದಾರೆ.

ಆಧಾರ್ ಹೊಂದಿರದ ರೈತರು ಸಹ ಆಧಾರ್‌ಗಾಗಿ ದಾಖಲಾತಿ ಆಗಿರುವ ಬಗ್ಗೆ ಅಂದರೆ 28 ಅಂಕಿಗಳ ಪುರಾವೆಯನ್ನು ಸಲ್ಲಿಸಿ ಬೆಳೆ ವಿಮೆಯಡಿ ನೋಂದಾಯಿಸಿ ಕೊಳ್ಳಬಹುದಾಗಿದೆ. ಆಧಾರ್ ದಾಖಲಾತಿ ಅಂದರೆ 28 ಅಂಕಿಗಳ ಮಾಹಿತಿ ಇರುವ ಪುರಾವೆ ನೀಡಿ ನೋಂದಣಿ ಮಾಡಿಸಿದ ರೈತರು ನಂತರ ಬ್ಯಾಂಕುಗಳಿಗೆ ಭೇಟಿ ನೀಡಿ ಆಧಾರ್ ಐಡೆಂಟಿಟಿಯ ಅಧಿಕೃತ ಸಂಖ್ಯೆಯನ್ನು ನೋಂದಾಯಿಸಿಕೊಂಡು ಮತ್ತು ಸಂಬಂಧಪಟ್ಟ ಬ್ಯಾಂಕ್ ಶಾಖೆಗಳು ಅಂತಹ ಖಾತೆಗಳನ್ನು ನಿಯಮಿತವಾಗಿ ಪರಿಶೀಲಿಸಬೇಕಾಗುತ್ತದೆ. ಇಲ್ಲವಾದಲ್ಲಿ ರೈತರ ಖಾತೆಗಳಿಗೆ ಜಮೆ ಆಗಬೇಕಿರುವ ವಿಮೆ ಪರಿಹಾರ ಮೊತ್ತ ವಿಳಂಬವಾಗಬಹುದು ಅಥವಾ ಜಮೆಯಾಗದೇ ಇರಬಹುದು. ಪ್ರಸಕ್ತ ಸಾಲಿನಲ್ಲಿ ನೋಂದಣಿ ಸಮಯದಲ್ಲಿಯೆ, ರೈತರು ತಮ್ಮ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಜೋಡಣೆಯಾಗಿರುವ ಬಗ್ಗೆ ಖಾತರಿ ಪಡಿಸಿಕೊಂಡು ಮತ್ತು ಜೋಡಣೆ ಆಗದಿರುವ ಸಂದರ್ಭದಲ್ಲಿ ಕಡ್ಡಾಯವಾಗಿ ರೈತರು ತಮ್ಮ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಜೋಡಣೆ ಮಾಡಿಕೊಳ್ಳಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಿಎಂಟಿಸಿ: ನೂತನ ಸಾರಿಗೆ ಸೇವೆಗಳ ಕಾರ್ಯಾಚರಣೆ

ಬೆಂಗಳೂರು, ಆಗಸ್ಟ್ 04 (ಕರ್ನಾಟಕ ವಾರ್ತೆ) :

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾರ್ವಜನಿಕರ ಪ್ರಯಾಣಿಕರ ಅನುಕೂಲಕ್ಕಾಗಿ 06 ಹೊಸ ಮಾರ್ಗಗಳನ್ನು ಪ್ರಾರಂಭಿಸಲಾಗಿದೆ. ಮಾರ್ಗ ಸಂಖ್ಯೆ: 515 ಕೆಂಗೇರಿ ಟಿಟಿಎಂಸಿ ಯಿಂದ ಜಾಲಹಳ್ಳಿ ಕ್ರಾಸ್‌ವರೆಗೆ ಸುತ್ತುವಳಿಗಳ ಸಂಖ್ಯೆ: 72, ಕೊಮ್ಮಘಟ್ಟ ಜಂಕ್ಷನ್, ಸರ್.ಎಂ.ವಿಶ್ವೇಶ್ವರಯ್ಯ ಲೇಔಟ್ 1ನೇ ಬ್ಲಾಕ್, ಸೊನ್ನೇನಹಳ್ಳಿ, ಉಪಕಾರ್ ಲೇಔಟ್ ಕ್ರಾಸ್, ಮುದ್ದಯ್ಯನಪಾಳ್ಯ, ಬಿ.ಇ.ಎಲ್ ಲೇಔಟ್ 1ನೇ ಹಂತ, ಸುಂಕದಕಟ್ಟೆ, ಹೆಗ್ಗನಹಳ್ಳಿ, ಪೀಣ್ಯ 2ನೇ ಹಂತ ಮತ್ತು ಎನ್.ಟಿ.ಟಿ.ಎಫ್, ಮಾರ್ಗ ಸಂಖ್ಯೆ: ಎಂಎಫ್ – 26 ಜಾಲಹಳ್ಳಿ ಕ್ರಾಸ್ ಮೆಟ್ರೋ ನಿಲ್ದಾಣದಿಂದ ಜಾಲಹಳ್ಳಿ ಕ್ರಾಸ್ ಮೆಟ್ರೋ ನಿಲ್ದಾಣದವರೆಗೆ ಸುತ್ತುವಳಿಗಳ ಸಂಖ್ಯೆ: 41, ರಾಜಗೋಪಾಲನಗರ ಪೊಲೀಸ್ ಠಾಣೆ, ಚೌಡೇಶ್ವರಿನಗರ, ಬಿಡಿಎ ಬಸ್ ಬೇ/ ಸ್ವಾತಂತ್ರ್ಯ ಯೋಧನಗರ, ಕಂಠೀರವ ಸ್ಟುಡಿಯೋ, ರಾಜಗೋಪಾಲನಗರ ಪೊಲೀಸ್ ಠಾಣೆ, ಮಾರ್ಗ ಸಂಖ್ಯೆ: ಎಂಎಫ್ – 24 ಜಾಲಹಳ್ಳಿ ಕ್ರಾಸ್ ಮೆಟ್ರೋ ನಿಲ್ದಾಣದಿಂದ ಲಗ್ಗೆರೆ ವರೆಗೆ ಸುತ್ತುವಳಿಗಳ ಸಂಖ್ಯೆ: 72, ರಾಜಗೋಪಾಲನಗರ ಪೊಲೀಸ್ ಠಾಣೆ, ಮಾರ್ಗ ಸಂಖ್ಯೆ: 410 – ಹೆಚ್ ಶ್ರೀನಗರದಿಂದ ಜಾಲಹಳ್ಳಿ ಕ್ರಾಸ್‌ವರೆಗೆ ಸುತ್ತುವಳಿಗಳ ಸಂಖ್ಯೆ: 04, ಹೊಸಕೆರೆಹಳ್ಳಿ ಕ್ರಾಸ್, ಪಿಇಎಸ್ ಕಾಲೇಜ್, ನಾಯಂಡಹಳ್ಳಿ, ಬಿ.ಯು.ಸಿ.ಗೇಟ್, ಮುದ್ದಯ್ಯನಪಾಳ್ಯ, ಬಿ.ಇ.ಎಲ್ ಲೇಔಟ್ 1ನೇ ಹಂತ, ಸುಂಕದಕಟ್ಟೆ, ಹೆಗ್ಗನಹಳ್ಳಿ, ಪೀಣ್ಯ 2ನೇ ಹಂತ ಮತ್ತು ಎನ್.ಟಿ.ಟಿ.ಎಫ್, ಮಾರ್ಗ ಸಂಖ್ಯೆ: 315 – ಜಿ ಕೆ.ಆರ್‌ಪುರಂ ನಿಂದ ದೊಮ್ಮಲೂರು ಟಿಟಿಎಂಸಿವರೆಗೆ ಸುತ್ತುವಳಿಗಳ ಸಂಖ್ಯೆ: 20, ಟಿನ್‌ಫ್ಯಾಕ್ಟರಿ, ಬೆನ್ನಿಗಾನಹಳ್ಳಿ, ಮೆಟ್ರೋ ನಿಲ್ದಾಣ, ಎಸ್.ವಿ.ಮೆಟ್ರೋ ನಿಲ್ದಾಣ, ಸಿ.ವಿ.ರಾಮನ್ ಆಸ್ಪತ್ರೆ, ಚಿನ್ಮಯ ಮಿಷನ್ ಆಸ್ಪತ್ರೆ, ಇಂದಿರಾನಗರ ಕೆ.ಎಫ್.ಸಿ, ಇ.ಎಸ್.ಐ. ಆಸ್ಪತ್ರೆ, ಮಾರ್ಗ ಸಂಖ್ಯೆ: 345 – ಎಫ್ ಸೇಂಟ್ ಜಾನ್ಸ್ ಆಸ್ಪತ್ರೆಯಿಂದ ಬನ್ನೇರುಘಟ್ಟ ಸರ್ಕಲ್‌ವರೆಗೆ ಸುತ್ತುವಳಿಗಳ ಸಂಖ್ಯೆ: 14, ಕೃಪಾನಿಧಿ ಕಾಲೇಜ್, ಮಡಿವಾಳ, ಬೊಮ್ಮನಹಳ್ಳಿ, ಹೊಂಗಸಂದ್ರ, ಬೇಗೂರು, ಸೇಂಟ್ ಮೇರಿಸ್ ಸ್ಕೂಲ್, ಹೊಮ್ಮದೇವನಹಳ್ಳಿ, ಕಲ್ಕೆರೆ ಮಾರ್ಗಗಳನ್ನು ಒಳಗೊಂಡಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 04 (ಕರ್ನಾಟಕ ವಾರ್ತೆ) :

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 4.8.2021(Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 34 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 35 | ಉತ್ತಮ | Ozone |
| 3 | ಕವಿಕ, ಮೈಸೂರುರಸ್ತೆ | 45 | ಉತ್ತಮ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 50 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 80 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 66 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 47 | ಉತ್ತಮ | $PM_{10}$ |
| **(4.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 45 | ಉತ್ತಮ | $PM_{10}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 71 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯ ಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 4.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 34 | Good | $PM_{10}$ |
| 2 | Jayanagar 5th Block, Shalini ground | 35 | Good | Ozone |
| 3 | KAVIKA, Mysore Road | 45 | Good | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 50 | Good | $PM_{10}$ |
| 5 | HSR Layout, near Central Silkboard | 80 | Satisfactory | $PM_{10}$ |
| 6 | City Railway Station, Magestic, Bengaluru | 66 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 47 | Good | $PM_{10}$ |
| **(4.8.2021 at 11.05 AM)** | | | | |
| 8 | BWSSB, Kadabesanahalli | 45 | Good | $PM_{10}$ |
| 9 | Peenya | * | * | * |
| 10 | BTM Layout | 71 | Satisfactory | CO |

* Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |